ಓ.ಎಸ್. ನಂ. 16/2024 ಪಿ.ಡಬ್ಲ್ಯೂ- 1

**ಸಾಕ್ಷಿಯನ್ನು ದಿನಾಂಕ 12.6.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ದಿನಾಂಕ 12.2.2025 ರಂದು ಆದ ಎಸ್.ಪಿ.ಎ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ1 ಎಂದು, ದಿನಾಂಕ 7.10.2020 ರ ನೋಂದಾಯಿತ ಕ್ರಯದ ಒಪ್ಪಂದದ ಕರಾರು ಪತ್ರದ ಅಸಲು ಪ್ರತಿಯನ್ನು ನಿಪಿ2 ಎಂದು, ಸಾಕ್ಷಿಯು ನಿಪಿ2 ರಲ್ಲಿರುವ ವಾದಿ ಗೋವಿಂದ ಭಟ್ ರವರ ಸಹಿಗಳನ್ನು ನೋಡಿ ಗುರುತಿಸಿದ್ದು ನಿಪಿ2 ರ ಕೊನೆಯ ಪುಟದಲ್ಲಿರುವ ಇರುವ ಸಹಿಯನ್ನು ನಿಪಿ2 ಎ ಎಂದು ಗುರುತಿಸಲಾಯಿತು. ಸಾಕ್ಷಿಯು 1 ಮತ್ತು 2 ನೇ ಪ್ರತಿವಾದಿಯರ ಹೆಬ್ಬೆಟ್ಟು ಗುರುತನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನಿಪಿ2 ರಲ್ಲಿರುವ 3 ಮತ್ತು 4 ನೇ ಪ್ರತಿವಾದಿಯ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ2 ಬಿ ಮತ್ತು ನಿಪಿ2 ಸಿ ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ2 ಕ್ಕೆ ಸಾಕ್ಷಿದಾರರಾಗಿ ಸಹಿ ಮಾಡಿರುವ ಶುಭಾನ್ ಮತ್ತು ಚೆನ್ನಸ್ವಾಮಿ ರವರ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನಿಪಿ2 ನ್ನು ತಯಾರಿಸಿದ ಶ್ರೀನಿವಾಸ್ ರವರ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ದಿನಾಂಕ 25.1.2021 ರಂದು ಆದ ನೋಂದಾಯಿತ ಮುಂದುವರೆದ ಕ್ರಯದ ಒಪ್ಪಂದದ ಕರಾರುಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ3 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ3 ರಲ್ಲಿರುವ ವಾದಿ ಗೋವಿಂದ ಭಟ್ ರವರ ಸಹಿಗಳನ್ನು ನೋಡಿ ಗುರುತಿಸಿದ್ದು ನಿಪಿ3 ರ ಕೊನೆಯ ಪುಟದಲ್ಲಿರುವ ಇರುವ ಸಹಿಯನ್ನು ನಿಪಿ3 ಎ ಎಂದು ಗುರುತಿಸಲಾಯಿತು. ಸಾಕ್ಷಿಯು 1 ಮತ್ತು 2 ನೇ ಪ್ರತಿವಾದಿಯರ ಹೆಬ್ಬೆಟ್ಟು ಗುರುತನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನಿಪಿ3 ರಲ್ಲಿರುವ 3 ಮತ್ತು 4 ನೇ ಪ್ರತಿವಾದಿಯ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ3 ಬಿ ಮತ್ತು ನಿಪಿ3 ಸಿ ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ3 ಕ್ಕೆ ಸಾಕ್ಷಿದಾರರಾಗಿ ಸಹಿ ಮಾಡಿರುವ

ಶುಭಾನ್ ಮತ್ತು ಚಿನ್ನಸ್ವಾಮಿ ರವರ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನಿಪಿ3 ನ್ನು ತಯಾರಿಸಿದ ಶ್ರೀನಿವಾಸ್‌ರವರ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ದಿನಾಂಕ 8.1.2024 ರಂದು ಪ್ರತಿವಾದಿಗಳಿಗೆ ನೀಡಿದ ನೋಟಿಸಿನ ಕಛೇರಿ ಪ್ರತಿಯನ್ನು ನಿಪಿ4 ಎಂದು, ನೋಟಿಸ್ ಕಳುಹಿಸಿದ ಬಗ್ಗೆ ನಾಲ್ಕು ಅಂಚೆ ರಶೀದಿಗಳನ್ನು ನಿಪಿ4 ಎ ರಿಂದ ನಿಪಿ4 ಡಿ ಎಂದು, ಹೆಚ್.ಡಿ.ಕೋಟೆ ಅಂಚೆ ಕಛೇರಿಗೆ ನೀಡಿದ ಕೋರಿಕೆ ಪತ್ರವನ್ನು ನಿಪಿ5 ಎಂದು, ಅಂಚೆ ಕಛೇರಿಯವರು ನೀಡಿರುವ ಟ್ರಾಕ್ ಕನ್‌ಸೈನಮೆಂಟಗಳನ್ನು ನಿಪಿ6 ರಿಂದ ನಿಪಿ8 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,
ಹೆಚ್.ಡಿ.ಕೋಟೆ